ಅ) ಗುಲ್ಬರ್ಗಾ ಜಿಲ್ಲೆಯ ಜಿಲ್ಲಾ ಪರಿಷತ್ ಸಾಮಾನ್ಯ ಸಭೆಯ ನಿರ್ಣಯ ಪ್ರಕಾರ ಪ್ರೌಢಶಾಲೆಗಳನ್ನು ಪ್ರಾರಂಭ ಮಾಡಿದರೂ ಸಹ ಅನುಮೋದನೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಹಿಂದುಳಿದ ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಶಿಕ್ಷಣ ಅಭಿವೃದ್ಧಿಗಾಗಿ ಅನುಮತಿ ನೀಡದೆ ಶಿಕ್ಷಣ ರಂಗದಲ್ಲಿ ಹಿಂದುಳಿದ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು?

ಇ) ಈ ವರ್ಷದಲ್ಲಾದರೂ ಪ್ರೌಢಶಾಲೆಗಳಿಗೆ ಮಂಜೂರಾತಿ ನೀಡಿ ಆ ಹಿಂದುಳಿದ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿ ಕೊಡಲಾಗುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಜಿಲ್ಲಾ ಪರಿಷತ್ತಿನ ಸಾಮಾನ್ಯ ಸಭೆಯ ನಿರ್ಣಯಗಳ ಪ್ರಕಾರ ಗುಲ್ಬರ್ಗ ಜಿಲ್ಲೆಯಲ್ಲಿ ಯಾವುದೇ ಪ್ರೌಢ ಶಾಲೆಯನ್ನು ಪ್ರಾರಂಭಿಸಿರುವುದಿಲ್ಲ. ಶಾಲೆಗಳನ್ನು ಪ್ರಾರಂಭಿಸಿರುವ ಬಗ್ಗೆ ಪ್ರಸ್ತಾವನೆ ಬಂದಿದ್ದು ಅನುಮತಿ ನೀಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಶೈಕ್ಷಣಿಕ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 90-91 ನೇ ಸಾಲಿಗೆ ಚಿಂಚೋಳಿ ತಾಲ್ಲೂಕಿನ ಕೊಂಚಾವರಂ ಮತ್ತು ದೇಗಲಮಡಿ ಗ್ರಾಮಗಳಲ್ಲಿ ಎರಡು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲಾಗಿದೆ.

ಇ) ಹೊಸ ಶಾಲೆಗಳನ್ನು ಪ್ರಾರಂಭಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಅನೇಕಲ್ ತಾಲ್ಲೂಕಿನಲ್ಲಿರುವ ಖಾಸಗಿ ಪ್ರೌಢಶಾಲೆಗಳ ಸಂಖ್ಯೆ

507 - ಶ್ರೀ ಎಂ.ಪಿ. ಕೇಶವಮೂರ್ತಿ (ಅನೇಕಲ್) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅನೇಕಲ್ ತಾಲ್ಲೂಕಿನಲ್ಲಿ ಎಷ್ಟು ಖಾಸಗಿ ಮತ್ತು ಸರ್ಕಾರಿ ಪ್ರೌಢಶಾಲೆಗಳಿವೆ, (ಪ್ರತ್ಯೇಕ ವಿವರ ತಿಳಿಸುವುದು)

ಆ) ಖಾಸಗಿ ಶಾಲೆಗಳಲ್ಲಿ ಅನುದಾನ ಪಡೆಯುತ್ತಿರುವ ಮತ್ತು ಅನುದಾನ ಪಡೆಯದಿರುವ ಪ್ರೌಢಶಾಲೆಗಳೆಷ್ಟು?

ಇ) ಪರಿಶಿಷ್ಟ ಜನಾಂಗದವರಿಂದ ನಡೆಸುತ್ತಿರುವ ಪ್ರೌಢಶಾಲೆಗಳೆಷ್ಟು?

ಈ) ಅನುದಾನ ಕೊಡುತ್ತಿರುವ ಪ್ರೌಢಶಾಲೆಗಳಲ್ಲಿ ಮೀಸಲಾತಿಯನ್ನು ಪಾಲಿಸಲಾಗುತ್ತಿದೆಯೇ, ಹಾಗಿದ್ದಲ್ಲಿ ಬೋಧಕ ಮತ್ತು ಬೋಧಕೇತರರ ವಿವರ ಕೊಡುವುದು.

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು)

ಅ) ಖಾಸಗಿ ಪ್ರೌಢ ಶಾಲೆಗಳು -11

ಸರ್ಕಾರಿ ಪ್ರೌಢ ಶಾಲೆಗಳು -3

ಆ) ಅನುದಾನ ಪಡೆಯುತ್ತಿರುವ ಪ್ರೌಢ ಶಾಲೆಗಳು -10

ಅನುದಾನ ಪಡೆಯದಿರುವ ಪ್ರೌಢ ಶಾಲೆಗಳು -1

ಇ) -2-

ಈ) ಪಾಲಿಸಲಾಗುತ್ತಿದೆ.

ಬೋಧಕ ಹುದ್ದೆಗಳು -138

ಬೋಧಕೇತರರ ಹುದ್ದೆಗಳು -49